**ಸಾಕ್ಷಿಗೆ ದಿನಾಂಕ 20.01.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀಮತಿ ಪಿ.ಡಿ.ಎಂ ವಕೀಲರಿಂದಃ

1. ನಾನು ಈ ಪ್ರಕರಣದಲ್ಲಿ, ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 1 | ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ |
| ನಿ.ಪಿ 2 | ಪ್ರಥಮ ಹೇಳಿಕೆಯ ದೃಢೀಕೃತ ಪ್ರತಿ |
| ನಿ.ಪಿ 3 | ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿ |
| ನಿ.ಪಿ 4 | ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿ |
| ನಿ.ಪಿ 5 | ಎಂ.ಎಲ್.ಸಿ. ಇಂಟಿಮೇಶನ್ ದೃಡೀಕೃತ ಪ್ರತಿ |
| ನಿ.ಪಿ 6 | ಕಲಂ 133 ರಡಿ ನೀಡಿದ ನೋಟೀಸ್ ನ ದೃಢೀಕೃತ ಪ್ರತಿ |
| ನಿ.ಪಿ 7 | ಕಲಂ 133 ರಡಿ ನೀಡಿದ ನೋಟೀಸಿಗೆ ಉತ್ತರ ದೃಢೀಕೃತ ಪ್ರತಿ |
| ನಿ.ಪಿ 8 | ಎಂ ವಿ ಐ ವರದಿಯ ದೃಢೀಕೃತ ಪ್ರತಿ |
| ನಿ.ಪಿ 9 | ದೋಷಾರೋಪಣ ಪತ್ರದ ದೃಢೀಕೃತ ಪ್ರತಿ |
| ನಿ.ಪಿ 10 | ಆಧಾರ್ ಕಾರ್ಡ್‌ನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |
| ನಿ.ಪಿ 11 | ಡಿಸ್ಚಾರ್ಜ್ ಸಮರಿ |

| | |
|---|---|
| | |
| ನಿ.ಪಿ 12 | 33 ಔಷಧಿ ಚೀಟಿಗಳು |
| ನಿ.ಪಿ 13 | 29 ಮೆಡಿಕಲ್ ಬಿಲ್ಲುಗಳು ಮೊತ್ತ ರೂ.4,93,442/- (ಅವುಗಳನ್ನು ಕ್ರಮವಾಗಿ ಕ್ರಮ ಸಂಖ್ಯೆ 1 ರಿಂದ 13 ಎಂದು ತೋರಿಸಲಾಗಿರುತ್ತದೆ.) |
| ನಿ.ಪಿ 14 | 5 ಮುಂಗಡ ರಶೀದಿಗಳು |
| ನಿ.ಪಿ 15 | 4 ಎಕ್ಸರೆಗಳು |

3. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀಸವಾಲು:</u> 2 ನೇ ಎದುರುದಾರರು ಗೈರುಹಾಜರು. ಈ ಕಾರಣದಿಂದ ಪಾಟೀಸವಾಲನ್ನು ಇರುವುದಿಲ್ಲ ಎಂದು ತೆಗೆದುಕೊಳ್ಳಲಾಯಿತು.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**